## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2025-26ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-124ರ ಘೋಷಣೆಯಂತೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜು ಹಾಗೂ ಯುವಿಸಿಇ ವಿಶ್ವವಿದ್ಯಾಲಯದಲ್ಲಿ ಖಾಲಿ ಇರುವ 2000 ಬೋಧಕ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ.

**ಓದಲಾಗಿದೆ:-** ಆಯುಕ್ತಾಲಯದ ಏಕಕಡತ ಸಂಖ್ಯೆ:DTE-PLAN0DVP1/31/2025 (E-1761112)

**ಪ್ರಸ್ತಾವನೆ:-**

2025–26ನೇ ಆರ್ಥಿಕ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-124 ರಲ್ಲಿ ಸನ್ಮಾನ್ಯ ಮುಖ್ಯಮಂತ್ರಿಯವರು ಕೆಳಕಂಡಂತೆ ಘೋಷಣೆ ಮಾಡಿರುತ್ತಾರೆ.

> "ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳು, ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು ಹಾಗೂ ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆಗಳಲ್ಲಿ ಖಾಲಿಯಿರುವ 2000 ಬೋಧಕ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮವಹಿಸಲಾಗುವುದು"

ಸದರಿ ಆಯವ್ಯಯ ಘೋಷಣೆಯ ಅನುಷ್ಠಾನಕ್ಕಾಗಿ ಆರ್ಥಿಕ ಇಲಾಖೆಯು ನೀಡಿದ ಬಜೆಟ್ ಸಲಹೆಯನ್ವಯ ಕಾರ್ಯಭಾರ, ವಿದ್ಯಾರ್ಥಿಗಳ ಸಂಖ್ಯೆ ಮತ್ತು AICTE ಪರಿಷ್ಕೃತ ವಿದ್ಯಾರ್ಥಿ-ಬೋಧಕರ ಅನುಪಾತದ (Student Faculty Ratio (SFR) ಮಾರ್ಗಸೂಚಿಗಳನ್ನು ಆಧರಿಸಿ, ಸರ್ಕಾರಿ ಪದವಿ ಕಾಲೇಜುಗಳು, ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು, ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆಗಳು ಹಾಗೂ ವಿಶ್ವೇಶ್ವರಯ್ಯ ಇಂಜಿನಿಯರಿಂಗ್ ಕಾಲೇಜು ವಿಶ್ವವಿದ್ಯಾಲಯದಲ್ಲಿ (ಯುವಿಸಿಇ) ಖಾಲಿಯಿರುವ ಒಟ್ಟು 2000 ಬೋಧಕ ವೃಂದದ ಸಹಾಯಕ ಪ್ರಾಧ್ಯಾಪಕ ಮತ್ತು ಉಪನ್ಯಾಸಕರ ಹುದ್ದೆಗಳ ವಿವರಗಳನ್ನು ಒದಗಿಸುತ್ತಾ, ಸದರಿ ಹುದ್ದೆಗಳ ಭರ್ತಿಯಿಂದ ವಿದ್ಯಾರ್ಥಿ ಪ್ರವೇಶಾತಿಗೆ ಅನುಗುಣವಾಗಿ ಅಗತ್ಯವಿರುವ ಬೋಧಕ ವೃಂದವನ್ನು ಒದಗಿಸುವುದರ ಜೊತೆಗೆ, AICTEನ ಮಾನದಂಡಗಳನ್ನು ಸಮರ್ಪಕವಾಗಿ ಪಾಲಿಸಲು ಮತ್ತು ಕೆಲವು ಸಂಸ್ಥೆಗಳಲ್ಲಿ ವಿಧಿಸಲಾದ ಪ್ರವೇಶಾತಿ ಕಡಿತವನ್ನು ನಿವಾರಿಸಲು ಸಹಕಾರಿಯಾಗಲಿದೆಯೆಂದು ತಿಳಿಸುತ್ತಾ, ಸದರಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರದ ಮಂಜೂರಾತಿ ನೀಡುವಂತೆ ಮೇಲೆ ಓದಲಾದ ಏಕ ಕಡತದಲ್ಲಿ ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಯ ಆಯುಕ್ತರು ಕೋರಿರುತ್ತಾರೆ.

ಸದರಿ ಪ್ರಸ್ತಾವನೆಯಲ್ಲಿ ಕಾಲೇಜು ಶಿಕ್ಷಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ 440 ಸರ್ಕಾರಿ ಪದವಿ ಕಾಲೇಜುಗಳಲ್ಲಿ ಮಂಜೂರಾಗಿರುವ ಹುದ್ದೆಗಳ ಪೈಕಿ ಪ್ರಸ್ತುತ ಖಾಲಿಯಿರುವ 754 ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ಭರ್ತಿ ಮಾಡಲು ಹಾಗೂ ವಿಶ್ವೇಶ್ವರಯ್ಯ ಇಂಜಿನಿಯರಿಂಗ್ ಕಾಲೇಜು ವಿಶ್ವವಿದ್ಯಾಲಯದಲ್ಲಿ (ಯುವಿಸಿಇ) ಖಾಲಿಯಿರುವ 72 ಬೋಧಕ ಹುದ್ದೆಗಳನ್ನು ಭರ್ತಿ ಮಾಡುವ ಅಗತ್ಯವಿರುವುದಾಗಿ ಕೋರಿಕೆ ಬಂದಿರುವ ಹಿನ್ನೆಲೆಯಲ್ಲಿ, ಸದರಿ ಹುದ್ದೆಗಳನ್ನು ಭರ್ತಿ ಮಾಡಲು ಪ್ರಸ್ತಾಪಿಸಲಾಗಿರುತ್ತದೆ.

ಮುಂದುವರಿದು, ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿರುವ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು ಹಾಗೂ ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆಗಳಲ್ಲಿ AICTE ನ

ಪರಿಷ್ಕೃತ SFR ಅನುಪಾತದಂತೆ ಹೆಚ್ಚುವರಿ ಎಂದು ಗುರುತಿಸಲಾದ ಹುದ್ದೆಗಳ ಮರುಹಂಚಿಕೆಯ ನಂತರವೂ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಖಾಲಿಯಿರುವ 186 ಸಹಾಯಕ ಪ್ರಾಧ್ಯಾಪಕರ ಹುದ್ದೆಗಳು ಹಾಗೂ ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆಗಳಲ್ಲಿ ಖಾಲಿಯಿರುವ 941 ಉಪನ್ಯಾಸಕರ ಹುದ್ದೆಗಳಂತೆ, ಒಟ್ಟು 1127 ಹುದ್ದೆಗಳನ್ನು ಭರ್ತಿ ಮಾಡಲು ಸಹ ಸದರಿ ಪ್ರಸ್ತಾವನೆಯಲ್ಲಿ ಆಯುಕ್ತರು ಪ್ರಸ್ತಾಪಿಸಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, 2025-26ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-124ರ ಘೋಷಣೆಯಂತೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳು, ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು, ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜುಗಳು ಹಾಗೂ ವಿಶ್ವೇಶ್ವರಯ್ಯ ಇಂಜಿನಿಯರಿಂಗ್ ಕಾಲೇಜು ವಿಶ್ವವಿದ್ಯಾಲಯದಲ್ಲಿ ಖಾಲಿಯಿರುವ ಹುದ್ದೆಗಳ ಪೈಕಿ 2000 ಬೋಧಕ ವೃಂದದ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರವು ತೀರ್ಮಾನಿಸಿರುತ್ತದೆ. ಅದರಂತೆ ಈ ಕೆಳಕಂಡ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ:ಇಡಿ 75 ಟಿಪಿಇ 2025</u>**

**<u>ಬೆಂಗಳೂರು, ದಿನಾಂಕ:04ನೇ ಫೆಬ್ರವರಿ 2026</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2025-26ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-124 ರಲ್ಲಿ ಸನ್ಮಾನ್ಯ ಮುಖ್ಯಮಂತ್ರಿಯವರು ಮಾಡಿರುವ ಘೋಷಣೆಯಂತೆ, ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳು, ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು, ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜುಗಳು ಹಾಗೂ ವಿಶ್ವೇಶ್ವರಯ್ಯ ಇಂಜಿನಿಯರಿಂಗ್ ಕಾಲೇಜು ವಿಶ್ವವಿದ್ಯಾಲಯದಲ್ಲಿ (UVCE) ಖಾಲಿಯಿರುವ ಬೋಧಕ ವೃಂದದ ಕೆಳಕಂಡ 2000 ಹುದ್ದೆಗಳನ್ನು ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು, ಕೆಳಕಂಡ ಷರತ್ತಿಗೊಳಪಟ್ಟು ಸರ್ಕಾರದ ಅನುಮತಿ ನೀಡಿ, ಆದೇಶಿಸಿದೆ.

| ಕ್ರ. ಸಂ | ಸಂಸ್ಥೆಗಳ ವಿವರಗಳು | ಭರ್ತಿ ಮಾಡಲು ಅನುಮತಿಸಿರುವ ಹುದ್ದೆಗಳ ಸಂಖ್ಯೆ ಮತ್ತು ಹುದ್ದೆಯ ಹೆಸರು | |
|---|---|---|---|
| | | ಹುದ್ದೆಯ ಹೆಸರು | ಸಂಖ್ಯೆ |
| 1. | ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳು | ಸಹಾಯಕ ಪ್ರಾಧ್ಯಾಪಕರು | 826 |
| 2. | ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜುಗಳು | ಉಪನ್ಯಾಸಕರು | 941 |
| 3. | ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು | ಸಹಾಯಕ ಪ್ರಾಧ್ಯಾಪಕರು | 186 |
| 4. | ವಿಶ್ವೇಶ್ವರಯ್ಯ ಇಂಜಿನಿಯರಿಂಗ್ ಕಾಲೇಜು ವಿಶ್ವವಿದ್ಯಾಲಯ (UVCE) | ಬೋಧಕರು (Teaching Faculty) | 47 |
| | | **ಒಟ್ಟು** | **2000** |

**ಷರತ್ತುಗಳು: -**

1) ವಿಶ್ವೇಶ್ವರಯ್ಯ ಇಂಜಿನಿಯರಿಂಗ್ ಕಾಲೇಜು ವಿಶ್ವವಿದ್ಯಾಲಯಕ್ಕೆ ಅನುಮತಿಸಿರುವ 47 ಹುದ್ದೆಗಳನ್ನು ಭರ್ತಿ ಮಾಡುವ ಮೊದಲು ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ:FD 22 Exp-8 2026, ದಿನಾಂಕ:17.01.2026ರನ್ವಯ ಈ ವಿಶ್ವವಿದ್ಯಾಲಯದಲ್ಲಿ ಖಾಲಿ ಇರುವ 72 ಬೋಧಕ ಹುದ್ದೆಗಳಿಗೆ ಸಂಬಂಧಿಸಿದಂತೆ ಸಮಗ್ರ ಮಾಹಿತಿ ಹಾಗೂ

ಅಗತ್ಯ ದಾಖಲೆಗಳನ್ನು ವಿಶ್ವೇಶ್ವರಯ್ಯ ಇಂಜಿನಿಯರಿಂಗ್ ಕಾಲೇಜು ವಿಶ್ವವಿದ್ಯಾಲಯವು ಸರ್ಕಾರಕ್ಕೆ ಒದಗಿಸುವುದು. ಅದರನ್ವಯ, ಸರ್ಕಾರವು ಅನುಮೋದನೆ ನೀಡಿದ ನಂತರ ಸದರಿ ಹುದ್ದೆಗಳ ನೇಮಕಾತಿಗೆ ಮುಂದಿನ ಕ್ರಮ ಕೈಗೊಳ್ಳತಕ್ಕದ್ದು.

2) ಸದರಿ ಹುದ್ದೆಗಳನ್ನು ವೃಂದ & ನೇಮಕಾತಿ ನಿಯಮಗಳನ್ವಯ ಅಗತ್ಯ ವಿದ್ಯಾರ್ಹತೆ ಹಾಗೂ ನೇಮಕಾತಿ ವಿಧಾನದನ್ವಯ ನೇರ ನೇಮಕಾತಿ ಮೂಲಕ ಭರ್ತಿ ಮಾಡತಕ್ಕದ್ದು.

3) ಈ ಹುದ್ದೆಗಳ ನೇಮಕಾತಿಗೆ ಸರ್ಕಾರವು ಕಾಲಕಾಲಕ್ಕೆ ಹೊರಡಿಸುವ ಮೀಸಲಾತಿ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.

4) ಕಲ್ಯಾಣ ಕರ್ನಾಟಕ ವೃಂದಕ್ಕೆ ಮೀಸಲಿರಿಸಿರುವ ಹುದ್ದೆಗಳನ್ನು ನಿಯಮಾನುಸಾರ ವರ್ಗೀಕರಿಸಿ ನೇಮಕಾತಿಗೆ ಕ್ರಮ ವಹಿಸತಕ್ಕದ್ದು.

ಈ ಆದೇಶವನ್ನು ಯೋಜನಾ ಇಲಾಖೆಯು ಟಿಪ್ಪಣಿ ಸಂಖ್ಯೆ:PDE-HDD/90/2025, ದಿನಾಂಕ:28.05.2025ರಲ್ಲಿ ನೀಡಿರುವ ಅಭಿಪ್ರಾಯ ಹಾಗೂ ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 439 ವೆಚ್ಚ-8/2025, ದಿನಾಂಕ:28.01.2026ರಲ್ಲಿ ನೀಡಿರುವ ಸಹಮತಿ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

ಎನ್. ಕುಮಾರ್ 04/02/2026

**(ಎನ್. ಕುಮಾರ್)**
ಸರ್ಕಾರದ ಉಪ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ
(ತಾಂತ್ರಿಕ ಶಿಕ್ಷಣ & ಯೋಜನೆ)

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು, ಕರ್ನಾಟಕ (ಎ & ಇ), ಬೆಂಗಳೂರು.
2. ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
3. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
4. ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
5. ಕುಲಸಚಿವರು, ಬೆಂಗಳೂರು ವಿಶ್ವವಿದ್ಯಾಲಯ, ಜ್ಞಾನಭಾರತಿ, ಬೆಂಗಳೂರು
6. ಕುಲಸಚಿವರು, ವಿಶ್ವೇಶ್ವರಯ್ಯ ಇಂಜಿನಿಯರಿಂಗ್ ಕಾಲೇಜು ವಿಶ್ವವಿದ್ಯಾಲಯ, ಕೆ.ಆರ್. ಸರ್ಕಲ್, ಬೆಂಗಳೂರು.

**ಪ್ರತಿ:**

1. ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ & ಸಾಂಖ್ಯಿಕ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು
4. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಉನ್ನತ ಶಿಕ್ಷಣ ಇಲಾಖೆ (ತಾಂತ್ರಿಕ & ಯೋಜನೆ) / (ಕಾಲೇಜು ಶಿಕ್ಷಣ) / (ವಿಶ್ವವಿದ್ಯಾಲಯಗಳು)
5. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-7 & 8), ವಿಧಾನಸೌಧ, ಬೆಂಗಳೂರು.
6. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.